## CALENDER OF EVENTS

**ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.**

| Website ವಿಳಾಸ: www.anganwadirecruit.kar.nic.in | | |
|---|---|---|
| ತಾತ್ಕಾಲಿಕ ವೇಳಾ ಪಟ್ಟಿ | | |
| ವಿವರಣೆ | ದಿನಗಳು | ದಿನಾಂಕ |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | – | 07.01.2021 ಬೆಳಿಗ್ಗೆ 10.00 ಗಂಟೆಯಿಂದ |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30 ದಿನಗಳು | 06.02.2021 ಸಂಜೆ 5.30 ಗಂಟೆವರೆಗೆ |
| ಆಯ್ಕೆ ಸಮಿತಿ ಸದಸ್ಯರು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಎನ್.ಐ.ಸಿ ಯಲ್ಲಿ ಸ್ವೀಕರಿಸಲಾದ ಅರ್ಜಿಗಳ ಪರಿಶೀಲನೆ | 2 ದಿನ | 10.02.2021 |
| ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು | 1 ದಿನ | 11.02.2021 |
| ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ಹಾಗೂ ಸಾರ್ವಜನಿಕ ಆಕ್ಷೇಪಣೆ ಸಲ್ಲಿಸುವಿಕೆ ಕಾಲಾವಕಾಶ | 7 ದಿನಗಳು | 12.02.2021 ರಿಂದ 18.02.2021 |
| ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ | 1 ದಿನ | 19.02.2021 |
| ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆಯುವುದು | 1 ದಿನ | 20.02.2021 |

**ಉಪನಿರ್ದೇಶಕರು**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**
**ದ.ಕ.ಜಿಲ್ಲೆ., ಮಂಗಳೂರು**

**ಕರ್ನಾಟಕ ಸರ್ಕಾರ**
**ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**
**ಜಿಲ್ಲಾ ಪಂಚಾಯತ್ ಸಂಕೀರ್ಣ, ನೆಲಮಹಡಿ, ಅಶೋಕನಗರ ಅಂಚೆ, ಕೊಟ್ಟಾರ,**
**ಮಂಗಳೂರು, ದ.ಕ.ಜಿಲ್ಲೆ– 575006**

**ಇ–ಮೇಲ್ ವಿಳಾಸ: wcddept@gmail.com** **ದೂರವಾಣಿ: 0824–2453071, 2451254**

ಸಂಖ್ಯೆ: ಉನಿಮ:ಮಮ:ಅಂಕಾಸ:ನೇಮಕಾತಿ:2020–21 ದಿನಾಂಕ: 07.01.2021

# ಅಧಿಸೂಚನೆ

ಸರ್ಕಾರದ ಆದೇಶ ಸಂಖ್ಯೆ: ಮಮಇ 303 ಐಸಿಡಿ 2017 ದಿನಾಂಕ: 23.09.2017 ರ ಪ್ರಕಾರ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತೆರವಾಗಿರುವ **15** ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳನ್ನು ಮಾಸಿಕ ಗೌರವಧನ ರೂ. 10,000/– ದಂತೆ ಹಾಗೂ **45** ಅಂಗನವಾಡಿ ಸಹಾಯಕಿಯರ ಹುದ್ದೆಗಳನ್ನು ಮಾಸಿಕ ಗೌರವಧನ ರೂ. 5,000/– ದಂತೆ ಗೌರವ ಸೇವೆಯ ನೆಲೆಯಲ್ಲಿ ಭರ್ತಿ ಮಾಡಲು ಆನ್‌ಲೈನ್ (ವೆಬ್‌ಸೈಟ್ ವಿಳಾಸ: **www.anganwadirecruit.kar.nic.in**) ಮೂಲಕ ಈ ಕೆಳಗಿನ ಮಾರ್ಗಸೂಚಿ/ನಿಬಂಧನೆಗಳಂತೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. 06.02.2021 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ.

**ಸೂಚನೆಗಳು:**

1. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಆನ್‌ಲೈನ್ (Online)ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ಈ ಕೆಳಗಿನ ನೇಮಕಾತಿಯ ಮಾರ್ಗಸೂಚಿ/ನಿಬಂಧನೆಗಳನ್ನು ಸ್ಪಷ್ಟವಾಗಿ ಓದಿಕೊಂಡು ನೀಡಲಾಗಿರುವ ಸೂಚನೆಯಂತೆ ಅರ್ಜಿಗಳನ್ನು ಭರ್ತಿ ಮಾಡಿ ಅವಶ್ಯಕ ದೃಢೀಕೃತ ದಾಖಲೆಗಳನ್ನು ಸ್ಪಷ್ಟವಾಗಿ ಕಾಣುವಂತೆ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸುವುದು.
3. ಆನ್‌ಲೈನ್ (Online) ಮೂಲಕ ಸಲ್ಲಿಸಿದ ದಾಖಲಾತಿಗಳನ್ನು ಮಾತ್ರ ಪರಿಗಣಿಸಲಾಗುವುದು.

**ಉಪನಿರ್ದೇಶಕರು**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**
**ದ.ಕ.ಜಿಲ್ಲೆ., ಮಂಗಳೂರು**

ಆನ್‌ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:

1. ಅರ್ಜಿ ನಿಗದಿತ ನಮೂನೆಯಲ್ಲಿ (ಆನ್‌ಲೈನ್)
2. ಮಹಿಳಾ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು.
3. ಅಭ್ಯರ್ಥಿಗಳ ವಯಸ್ಸು ಅರ್ಜಿ ಸಲ್ಲಿಸುವ ದಿನಾಂಕಕ್ಕೆ, 18 ವರ್ಷ ಪೂರ್ಣಗೊಂಡಿರಬೇಕು. ಹಾಗೂ 35 ವರ್ಷ ಮೀರಿರಬಾರದು.
4. ಕಾರ್ಯಕರ್ತೆ ಹುದ್ದೆಗೆ ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ.

   ಸಹಾಯಕಿ ಹುದ್ದೆಗೆ ಜನ್ಮ ದಿನಾಂಕ ನಮೂದಿಸಿರುವ ಶಿಕ್ಷಣ ಇಲಾಖೆ ನೀಡಿರುವ TC (ವರ್ಗಾವಣೆ ಪ್ರಮಾಣ ಪತ್ರ). ಅಥವಾ ಕಂದಾಯ ಇಲಾಖೆ ನೀಡಿರುವ ಜನನ ಪ್ರಮಾಣ ಪತ್ರ.
5. ನಿಗದಿ ಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ.
6. ಅಭ್ಯರ್ಥಿಯು ಅದೇ ಗ್ರಾಮದಲ್ಲಿ (ನಗರ ಪ್ರದೇಶವಾಗಿದ್ದಲ್ಲಿ ಅದೇ ವಾರ್ಡಿನಲ್ಲಿ) ವಾಸ್ತವ್ಯವಿರುವ ಬಗ್ಗೆ ತಹಶೀಲ್ದಾರರು/ಉಪ ತಹಶೀಲ್ದಾರರು ಒಂದು (1) ವರ್ಷದೊಳಗೆ ನೀಡಿರುವ ವಾಸಸ್ಥಳ ದೃಢೀಕರಣ ಪತ್ರ.
7. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಿರಿಸಿದ ಕೇಂದ್ರಗಳಿಗೆ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
8. ವಿಧವೆಯಾಗಿದ್ದಲ್ಲಿ ಪತಿಯ ಮರಣ ಪ್ರಮಾಣ ಪತ್ರ ಹಾಗೂ ಪತಿಯಾಗಿರುವ ಬಗ್ಗೆ ಪುರಾವೆ ಇರುವ ದಾಖಲೆ.
9. ಅಭ್ಯರ್ಥಿಯು ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಯಾಗಿದ್ದಲ್ಲಿ ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
10. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರು ಅಂಗವಿಕಲರಾಗಿದ್ದಲ್ಲಿ, 60% ಕ್ಕಿಂತ ಕಡಿಮೆ ಅಂಗವಿಕಲತೆ ಇರುವ ಬಗ್ಗೆ ಪ್ರಮಾಣ ಪತ್ರ.. (ಅಂಗವಿಕಲರ ಗುರುತು ಚೀಟಿ ಪ್ರತಿ).(ಕುರುಡರು, ಕಿವುಡರು, ಮೂಕರು, ಬುದ್ಧಿಮಾಂದ್ಯರು, ಮಾನಸಿಕ ಅಸ್ವಸ್ಥರು ಅರ್ಹರಲ್ಲ
11. ಅಭ್ಯರ್ಥಿಯು ವಿಚ್ಛೇದಿತರಾಗಿದ್ದಲ್ಲಿ, ವಿಚ್ಛೇದನಾ ಪ್ರಮಾಣ ಪತ್ರ. (ನ್ಯಾಯಾಲಯದಿಂದ ಪಡೆದಿರಬೇಕು).
12. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಅರ್ಜಿ ಸಲ್ಲಿಸಿದಲ್ಲಿ ಈ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
13. ಅಭ್ಯರ್ಥಿಯು ಪರಿತ್ಯಕ್ತೆಯಾಗಿದ್ದಲ್ಲಿ, ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
14. ಅಭ್ಯರ್ಥಿಯು ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ/ ಸ್ವಾಧಾರ ನಿವಾಸಿಯಾಗಿದ್ದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
15. ಅಭ್ಯರ್ಥಿಯು ಯೋಜನಾ ನಿರಾಶ್ರಿತರಾಗಿದ್ದಲ್ಲಿ, ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ದ.ಕ.ಜಿಲ್ಲೆ., ಮಂಗಳೂರು

## Department of Women & Child Development, Dakshina Kannada

| Sl.no | ICDS Project | District |
|---|---|---|
| 1 | Belthangady | Dakshina Kannada |
| 2 | Sullia | |
| 3 | Mangaluru Urban | |
| 4 | Mangaluru Rural | |
| 5 | Bantwal | |
| 6 | Vitla | |
| 7 | Puttur | |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ದ.ಕ.ಜಿಲ್ಲೆ., ಮಂಗಳೂರು

## Help Desk

## Contact for required Details

| Sl.no | ICDS Project | Contact No |
|---|---|---|
| 1 | Belthangady | 08256-232134 |
| 2 | Sullia | 08257-230239 |
| 3 | Mangaluru Urban | 0824-2432809 |
| 4 | Mangaluru Rural | 0824-2263199 |
| 5 | Bantwal | 08255-232465 |
| 6 | Vitla | 08255-238080 |
| 7 | Puttur | 08251-230388 |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ದ.ಕ.ಜಿಲ್ಲೆ., ಮಂಗಳೂರು

**ಸರ್ಕಾರಿ ಆದೇಶ ಸಂಖ್ಯೆ: ಮಮಇ 303 ಐಸಿಡಿ 2017, ದಿನಾಂಕ:23.09.2017 ಕ್ಕೆ ಅನುಬಂಧ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರನ್ನು ಆಯ್ಕೆ ಮಾಡಲು ಮಾರ್ಗಸೂಚಿಗಳು ಮತ್ತು ಅರ್ಹತೆಯ ಮಾನದಂಡಗಳು.**

**1. ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಆಯ್ಕೆಗೆ ಅರ್ಹತೆ ಮಾನದಂಡಗಳು:-**

**1) ವಯೋಮಿತಿ:**

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ವಯಸು ಅರ್ಜಿ ಸಲ್ಲಿಸುವ ದಿನಾಂಕಕ್ಕೆ 18-35 ವರ್ಷ ವಯೋಮಿತಿಯೊಳಗಿರಬೇಕು. ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಗಳಲ್ಲಿ ವಿಕಲಚೇತನರಿಗೆ ಗರಿಷ್ಟ ವಯೋಮಿತಿಯಲ್ಲಿ 10 ವರ್ಷ ಸಡಿಲಿಕೆ ಇದೆ.

**2) ಸ್ಥಳೀಯತೆ:**

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಗೆ ಸ್ಥಳೀಯರಾಗಿರಬೇಕು.
ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ ಒಂದು(1) ವರ್ಷದೊಳಗೆ ಸಂಬಂಧಪಟ್ಟ ತಹಶೀಲ್ದಾರರಿಂದ/ಉಪ ತಹಶೀಲ್ದಾರರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.

**3) ವಿದ್ಯಾರ್ಹತೆ:**

i) **ಅಂಗನವಾಡಿ ಕಾರ್ಯಕರ್ತೆ:** ಎಸ್.ಎಸ್.ಎಲ್.ಸಿ ತೇರ್ಗಡೆ. ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

ಅ) ಕರ್ನಾಟಕ ರಾಜ್ಯ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಮುಕ್ತ ಶಾಲೆ/ಮುಕ್ತ ವಿದ್ಯಾಲಯಗಳಲ್ಲಿ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಥಮ/ದ್ವಿತೀಯ ಭಾಷೆಯಾಗಿ ಕನ್ನಡ ಹಾಗೂ ಸಾಮಾನ್ಯ ಗಣಿತ ಮತ್ತು ಸಮಾಜ ಶಾಸ್ತ್ರ/ಸಮಾಜ ವಿಜ್ಞಾನ ವಿಷಯಗಳನ್ನು ಕಡ್ಡಾಯವಾಗಿ ವ್ಯಾಸಂಗ ಮಾಡಿದ್ದು, ಪ್ರಮಾಣ ಪತ್ರ/ಅಂಕಪಟ್ಟಿಯು ಗರಿಷ್ಠ 625, ಕನಿಷ್ಠ 219 ಅಂಕಗಳನ್ನು ಹೊಂದಿದಲ್ಲಿ, ಅಂತಹ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

ಆ) ಬೇರೆ ರಾಜ್ಯಗಳ ಶಾಲೆಗಳಲ್ಲಿ ವ್ಯಾಸಂಗ ಮಾಡಿದ್ದು, ಕನ್ನಡವನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದರೂ, ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಆ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಠ ಹಾಗೂ ಕನಿಷ್ಠ ಅಂಕಗಳು ಹಾಗೂ ಕರ್ನಾಟಕ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಠ ಹಗೂ ಕನಿಷ್ಠ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಕರ್ನಾಟಕದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು.

ಇ) ಅಂಗನವಾಡಿ ಕಾರ್ಯಕರ್ತೆಯರು ಶಾಲಾ ಪೂರ್ವ ಶಿಕ್ಷಣವನ್ನು ಹಾಗೂ ದಾಖಲೆಗಳನ್ನು ಕನ್ನಡದಲ್ಲಿ ನಿರ್ವಹಿಸಬೇಕಾಗಿರುವುದರಿಂದ ಅಭ್ಯರ್ಥಿಗಳು ಯಾವುದೇ ಭಾಷಾ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದರೂ ಹಾಗೂ ಯಾವುದೇ ರಾಜ್ಯದಲ್ಲಿ ವ್ಯಾಸಂಗ ಮಾಡಿದ್ದರೂ ಸಹ ಅವರು ಕನ್ನಡ ಭಾಷೆಯನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ವ್ಯಾಸಂಗ ಮಾಡಿರಬೇಕು ಹಾಗೂ ಮಾತೃಭಾಷೆ ಕನ್ನಡವಲ್ಲದೇ ಇರುವ ಅಭ್ಯರ್ಥಿಗಳಿಗೆ ಆಯ್ಕೆ ಸಮಿತಿಯು ಆಯ್ಕೆ ಸಮಯದಲ್ಲಿ ಸಂದರ್ಶನ ಏರ್ಪಡಿಸಿ ಹಾಗೂ ಅವಶ್ಯವಿದ್ದಲ್ಲಿ ಕನ್ನಡ ಭಾಷೆಯ ಜ್ಞಾನದ ಕುರಿತಂತೆ ಓದಿಸಿ, ಬರೆಸಿ ಅವರ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಿ ಅವರ ಆಯ್ಕೆಯನ್ನು ನಿರ್ಧರಿಸಲಾಗುವುದು.

## ii) ಅಂಗನವಾಡಿ ಸಹಾಯಕಿ:

ಅ) ಕನಿಷ್ಠ 4ನೇ ತರಗತಿ ತೇರ್ಗಡೆ, ಗರಿಷ್ಠ 9ನೇ ತರಗತಿ ತೇರ್ಗಡೆ. ಇದರಲ್ಲಿ ಹೆಚ್ಚಿನ ವಿದ್ಯಾರ್ಹತೆಯುಳ್ಳವರನ್ನು ಆಯ್ಕೆ ಮಾಡಲಾಗುವುದು. 9ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

ಆ) ಒಂದೇ ವಿದ್ಯಾರ್ಹತೆಯುಳ್ಳ ಒಂದಕ್ಕಿಂತ ಹೆಚ್ಚು ಅರ್ಜಿ ಬಂದಿದಲ್ಲಿ ಹೆಚ್ಚು ಅಂಕಗಳಿಸಿದವರನ್ನು ಆಯ್ಕೆ ಮಾಡಲಾಗುವುದು.

## ಆಯ್ಕೆ ಆದ್ಯತೆ:

ಈ ಕೆಳಕಂಡಂತೆ ಆದ್ಯತೆ ಪಡೆಯಲು ಇಚ್ಚಿಸುವ ಅರ್ಜಿದಾರರಿ ನಿಗದಿತ ವಿದ್ಯಾರ್ಹತೆ ಹೊಂದಿದ್ದು, ವಯೋಮಿತಿಯೊಳಗೆ ಮತ್ತು ಸ್ಥಳೀಯರಾಗಿರಬೇಕಾಗಿರುವುದು ಕಡ್ಡಾಯ.

### 1) ಆಸಿಡ್ ದಾಳಿಗೊಳಗಾದವರ ಆಯ್ಕೆ:-

ಆಸಿಡ್ ದಾಳಿಗೆ ತುತ್ತಾದ ಮಹಿಳೆಯರು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ, ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ಮೊದಲ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡಲಾಗುವುದು.

### 2) ಇಲಾಖೆಯ ಸಂಸ್ಥೆಗಳ ನಿವಾಸಿಗಳ ಆಯ್ಕೆ:

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗಳಿಗೆ ಬಾಲನ್ಯಾಯ ಕಾಯ್ದೆಯಡಿ ಇಲಾಖೆಯ ಸಂಸ್ಥೆಗಳಲ್ಲಿ ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ಆಶ್ರಯ ಪಡೆದ ಹಾಲಿ/ಮಾಜಿ ನಿವಾಸಿಗಳು ಅರ್ಜಿ ಸಲ್ಲಿಸಿದಾಗ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸಿದೆ ಎರಡನೆ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡಲಾಗುವುದು.

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗಳಿಗೆ ವಿಧವೆಯರು ಅರ್ಜಿ ಸಲ್ಲಿಸಿದಾಗ ಮಾರ್ಗ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ಮೂರನೆ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸಿದ ನಂತರ ವಿಧವೆಯಾದಲ್ಲಿ ಪರಿಗಣಿಸಲಾಗುವುದಿಲ್ಲ.

ವಿಧವೆಯರಲ್ಲಿ, ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಗೆ(ವಿಧವೆಗೆ) ಪ್ರಥಮ ಆದ್ಯತೆ ನೀಡಲಾಗುವುದು.

ವಿಧವೆಯರು ತಾವು ಪ್ರಸ್ತುತ ಎಲ್ಲಿ ವಾಸವಾಗಿರುವುದಾಗಿ, ವಾಸಸ್ಥಳ ದೃಢೀಕರಣವನ್ನು ಸಲ್ಲಿಸಿರುತ್ತಾರೆ. ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸಲಾಗುವುದು.

ಒಂದೇ ಹುದ್ದೆಗೆ ಇಬ್ಬರು ವಿಧವೆಯರು ಅರ್ಜಿ ಸಲ್ಲಿಸಿದ್ದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಲಾಗುವುದು.

### 3) ಅಂಗವಿಕಲರ ಆಯ್ಕೆ:

ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅಂಗವಿಕಲರು ಅರ್ಜಿ ಸಲ್ಲಿಸಿದಾಗ, ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ನಾಲ್ಕನೆ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡಲಾಗುವುದು.

ಅಂಗವಿಕಲರು ಪ್ರಸ್ತುತ ತಾವು ಎಲ್ಲಿ ವಾಸವಾಗಿರುವುದಾಗಿ ವಾಸಸ್ಥಳ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೋ ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸಲಾಗುವುದು.

ಅಂಗನವಾಡಿ ಕಾರ್ಯಕರ್ತೆ ಹುದ್ದೆಯಲ್ಲಿ 3-6 ವರ್ಷ ಮಕ್ಕಳಿಗೆ ಆಟ ಮತ್ತು ಅಭಿನಯ ಗೀತೆಗಳ ಮೂಲಕ ಶಾಲಾ ಪೂರ್ವ ಶಿಕ್ಷಣವನ್ನು ನೀಡಲಾಗುತ್ತಿದ್ದು, ಚಟುವಟಿಕೆ ವೇಳೆಯಲ್ಲಿ ಮಕ್ಕಳನ್ನು ಹಿಡಿದೆತ್ತಿ ನಿಲ್ಲಿಸಲು ಹಾಗೂ

ಅಭಿನಯ ಮಾಡಿ ತೋರಿಸಬೇಕಾಗಿರುತ್ತದೆ. ವೃತ್ತಸಭೆ, ತಾಯಂದಿರ ಸಭೆ ಮತ್ತು ಮನೆ ಭೇಟಿ ನಿರ್ವಹಿಸಬೇಕಾಗಿರುತ್ತದೆ. ಆದ ಕಾರಣ ಕಿವುಡರು ಮತ್ತು ಮೂಕರು, ಕುರುಡರು, ಬುದ್ಧಿ ಮಾಂದ್ಯರು, ಮಾನಸಿಕ ಅಸ್ವಸ್ಥರು ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಲ್ಲ.

ಅಂಗನವಾಡಿ ಸಹಾಯಕಿಯ ಹುದ್ದೆಯಲ್ಲಿ ಅಂಗನವಾಡಿ ಫಲಾನುಭವಿಗಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಬೇಯಿಸಿ/ಸಿದ್ಧಪಡಿಸಿ ಉಣಬಡಿಸುವುದು, ಕೇಂದ್ರವನ್ನು ಸ್ವಚ್ಛಗೊಳಿಸುವುದು, ಮಕ್ಕಳನ್ನು ಅವರ ಮನೆಗಳಿಂದ ಕೇಂದ್ರಕ್ಕೆ ಕರೆತರುವುದು ಹಾಗೂ ಕಾರ್ಯಕರ್ತೆಯು ವೃತ್ತಸಭೆ, ತಾಯಂದಿರ ಸಭೆ ಮತ್ತು ಮನೆ ಭೇಟಿಗೆ ಹೋದಾಗ ಅಂಗನವಾಡಿ ಕೇಂದ್ರದ ಜವಾಬ್ದಾರಿಯನ್ನು ನಿರ್ವಹಿಸಬೇಕು. ಆದ್ದರಿಂದ ಸಹಾಯಕಿ ಹುದ್ದೆಗೆ ಅಂಗವಿಕಲ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಲ್ಲ.

ಇತರೆ ದೈಹಿಕ ಅಂಗವೈಕಲ್ಯತೆ ಶೇ.60 ಮೀರದಂತೆ ಇರುವವರು ಅರ್ಜಿ ಸಲ್ಲಿಸಬಹುದಾಗಿದೆ. ಅಂಗೀಕೃತ ಪ್ರಾಧಿಕಾರ (ಜಿಲ್ಲಾ ವೈದ್ಯಕೀಯ ಮಂಡಳಿ)ಯಿಂದ ಪಡೆದ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಹಾಜರುಪಡಿಸಬೇಕು.

ಅಂಗವಿಕಲ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಅಂಗವಿಕಲತೆಯ ಪ್ರಮಾಣದ ಬಗ್ಗೆ ಸಂಶಯ ಉಂಟಾದಲ್ಲಿ ಆ ಅಭ್ಯರ್ಥಿಯನ್ನು ಆಯ್ಕೆ ಸಮಿತಿಯ ಮುಂದೆ ಖುದ್ದು ಹಾಜರಾಗಲು ಸೂಚಿಸಿ ಸದರಿ ಹುದ್ದೆ ನಿರ್ವಹಿಸಲು ಸಮರ್ಥರಿರುವ ಬಗ್ಗೆ ಸಮಿತಿಯೇ ಪರಿಶೀಲಿಸಿ ನಿರ್ಧರಿಸಲಾಗುವುದು.

ಒಂದೇ ಹುದ್ದೆಗೆ ಇಬ್ಬರು ಅಂಗವಿಕಲರು ಅರ್ಜಿ ಸಲ್ಲಿಸಿದ್ದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಲಾಗುವುದು.

**ಬೋನಸ್ ಅಂಕಗಳು:- (ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ)**

ಮಾಜಿ ದೇವದಾಸಿಯ ಮಗಳು, ಯೋಜನಾ ನಿರಾಶ್ರಿತರು, ವಿಚ್ಛೇದಿತ ಮಹಿಳೆಯರು, ಪರಿತ್ಯಕ್ತೆಯರು ಇವರು ಸೂಕ್ತ ದಾಖಲೆಗಳನ್ನು ಸಲ್ಲಿಸಿದಲ್ಲಿ ಪ್ರತೀ ವಿನಾಯಿತಿಗೆ 5 ಬೋನಸ್ ಅಂಕಗಳನ್ನು ನೀಡಲಾಗುವುದು.

ಅಭ್ಯರ್ಥಿಯ ಆಯ್ಕೆಗಳನ್ನು ಅರ್ಹತೆಯ ಆಧಾರದ ಮೇಲೆ ನಡೆಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗುವಾಗ ಮೂಲ ದಾಖಲೆಗಳನ್ನು ಸಲ್ಲಿಸಬೇಕು.

**ಉಪನಿರ್ದೇಶಕರು**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**
**ದ.ಕ.ಜಿಲ್ಲೆ., ಮಂಗಳೂರು**

| Annexure - B | | | | |
|---|---|---|---|---|
| Anganawadi Workers Vacancy list (Details required in English) | | | | |
| Sl. No | Anganawadi Center Name | Grama Panchayath/ Ward No | Reserved for (SC/ST/ Others) | ICDS Project |
| 1 | KUKRABETTU | MARODI | OTHERS | BELTHANGADY |
| 2 | MARYHILL | KAVOOR / WARD NO - 19 | OTHERS | MANGALORE URBAN |
| 3 | VAIDHYANATHESHWARA KAVOOR | KUNJATHBAIL / WARD NO - 15 | OTHERS | MANGALORE URBAN |
| 4 | GORIGUDDA | FALNIR / WARD NO - 39 | OTHERS | MANGALORE URBAN |
| 5 | PODARSITE | PAVOORU | OTHERS | MANGALORE RURAL |
| 6 | KALLAPU | ULLALA NAGARASABHE WARD NO 17 | OTHERS | MANGALORE RURAL |
| 7 | ELINJE | IKALA | OTHERS | MANGALORE RURAL |
| 8 | KOLAMBE | MEERAMAJALU | OTHERS | BANTWAL |
| 9 | VALAVOORU MASIDI BALI | THUMBE | OTHERS | BANTWAL |
| 10 | JARANDAGUDDE | KALLIGE | OTHERS | BANTWAL |
| 11 | PALLIPADI | KARIYANGALA | OTHERS | BANTWAL |
| 12 | PERLAPU | KADESHIVALAYA | OTHERS | VITLA |
| 13 | BUDOLI | PERAJE | OTHERS | VITLA |
| 14 | UDANE KALAPPARU | SHIRADI | OTHERS | PUTTUR |
| 15 | KEPULU | PUTTUR NAGARASABHE / WARD NO 8 | OTHERS | PUTTUR |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮಂಗಳೂರು

| Annexure - B | | | | |
|---|---|---|---|---|
| Anganawadi Helpers Vacancy list | | | | |
| (Details required in English) | | | | |
| Sl. No | Anganawadi Center Name | Grama Panchayath/ Ward No | Reserved for (SC/ST/ Others) | ICDS Project |
| 1 | REKHYA | ARASINAMAKKI | OTHERS | BELTHANGADY |
| 2 | KALMADKA | KALMADKA | OTHERS | SULLIA |
| 3 | JAYANAGARA | SULLIA NAGARAPANCHAYATH /WARD-3 | OTHERS | SULLIA |
| 4 | GANESH FRIENDS KUDROLI | KASABA BAZAR/ WARD NO - 43 | OTHERS | MANGALORE URBAN |
| 5 | ST.ANNS BOLARA | KASABA BAZAR/ WARD NO - 45 | OTHERS | MANGALORE URBAN |
| 6 | PANAMBUR MOGAVEERA SABHA | KULAI/WARD NO -9 | OTHERS | MANGALORE URBAN |
| 7 | KUDUMBUR | BAIKAMPADY /WARD NO-10 | OTHERS | MANGALORE URBAN |
| 8 | GORIGUDDA | FALNIR / WARD O - 39 | OTHERS | MANGALORE URBAN |
| 9 | BENGRE SUPER STAR | BENGRE / WARD NO -11 | OTHERS | MANGALORE URBAN |
| 10 | BENGRE KASABA 2 | BENGRE / WARD NO -60 | OTHERS | MANGALORE URBAN |
| 11 | BENGRE SCHOOL 2 | BENGRE / WARD NO -60 | OTHERS | MANGALORE URBAN |
| 12 | MUGERAKALA | PADUMARNADU | OTHERS | MANGALORE RURAL |
| 13 | CHELYARUPADAVU | CHELYARU | OTHERS | MANGALORE RURAL |
| 14 | EDURUPADAVU | MOODUSHEDDE | OTHERS | MANGALORE RURAL |
| 15 | CHITRAPU | MULKI NAGARA PANCHAYATH W.NO 22 | OTHERS | MANGALORE RURAL |
| 16 | BADRIYA NAGARA | PAVOORU | OTHERS | MANGALORE RURAL |
| 17 | KHANDIGEMOOLE | HAREKALA | OTHERS | MANGALORE RURAL |
| 18 | KONAJE | KONAJE | OTHERS | MANGALORE RURAL |
| 19 | HOSAKADU | KEMRAL | OTHERS | MANGALORE RURAL |
| 20 | KONCHARU | BAJPE | OTHERS | MANGALORE RURAL |
| 21 | GANDHI NAGARA | AMBLAMOGARU | OTHERS | MANGALORE RURAL |
| 22 | TENKAMIJARU | TENKAMIJARU | OTHERS | MANGALORE RURAL |
| 23 | JOKATTE-3 | JOKATTE | OTHERS | MANGALORE RURAL |
| 24 | JAIN PETE | MOODABIDRE PURASABHE W.NO 6 | OTHERS | MANGALORE RURAL |
| 25 | TEVUKADU | MERAMAJALU | OTHERS | BANTWAL |
| 26 | HOSMARU | PURASABHE WARD NO 5 | OTHERS | BANTWAL |
| 27 | LORETTOPADAVU | PURASABHE WARD NO 1 | OTHERS | BANTWAL |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮಂಗಳೂರು

| | | | | |
|---|---|---|---|---|
| 28 | KELAGINA VOGGA | KAVALAPADURU | OTHERS | BANTWAL |
| 29 | GOODINABALI | PURASABHE WARD NO 11 | OTHERS | BANTWAL |
| 30 | TALAPADY | PURASABHE WARD NO 15 | OTHERS | BANTWAL |
| 31 | KESHAVANAGARA | GOLTHAMAJALU | OTHERS | BANTWAL |
| 32 | SIDDAKATTE CHURCH | KUKKIPADY | OTHERS | BANTWAL |
| 33 | KADESHIVALAYA | KADESHIVALAYA | OTHERS | VITLA |
| 34 | KEPULAGUDDE | KANYANA | OTHERS | VITLA |
| 35 | KONEMAJALU | KOILA | OTHERS | PUTTUR |
| 36 | MARDALA | MARDHALA | OTHERS | PUTTUR |
| 37 | VALYA | KUTRUPPADI | OTHERS | PUTTUR |
| 38 | KORAMERU | KOWKRADI | OTHERS | PUTTUR |
| 39 | ARLAPADAVU | PANAJE | OTHERS | PUTTUR |
| 40 | AJALADKA | OLAMOGRU | OTHERS | PUTTUR |
| 41 | KATTATHARU | KEYYUR | OTHERS | PUTTUR |
| 42 | IDABETTU | ARYAPU | OTHERS | PUTTUR |
| 43 | KUTTINOPINADKA | OLAMOGRU | OTHERS | PUTTUR |
| 44 | ADARSHA NAGARA | 34 NEKKILADI | OTHERS | PUTTUR |
| 45 | BOLWAR | NAGARASABHE WARD NO- 15 | OTHERS | PUTTUR |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮಂಗಳೂರು